# 2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ
# ಉತ್ತರ ಕನ್ನಡ : ಕಾರವಾರ

**ಎಸ್.ಸಿ.ಕೇಸ್ ನಂ. 20/2017**

**ದೋ.ಸಾ. :20 ಫ್ರಾ.ಸಾ. : 15**

| | | |
|---|---|---|
| ಸಾಕ್ಷಿಯ ಹೆಸರು | : | ಓಂಕಾರಪ್ಪ |
| ತಂದೆಯ ಹೆಸರು | : | ಹನುಮಂತಪ್ಪ |
| ವಯಸ್ಸು | : | 65 ವರ್ಷ |
| ಕೆಲಸ | : | ನಿವೃತ್ತ ಪಿ.ಎಸ್.ಐ. |
| ವಾಸ | : | ದಾವಣಗೆರೆ |

**ದಿನಾಂಕಃ 20-11-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**(ದಂಡ ಪ್ರಕ್ರಿಯಾ ಸಂಹಿತೆ ಕಲಂ 299 ರಡಿಯಲ್ಲಿ ಸಾಕ್ಷಿಯ ವಿಚಾರಣೆ)**

**ಮುಖ್ಯ ವಿಚಾರಣೆಃ ಸರಕಾರಿ ಅಭಿಯೋಜಕರಿಂದಃ-**

1. ನಾನು ಜುಲೈ 2014 ರಿಂದ ಜನವರಿ 2018 ರವರೆಗೆ ಅಂಕೋಲಾ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿದ್ದೇನೆ. ದಿ.24-01-2017 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ, ಬೆಳಿಗ್ಗೆ 11.00 ಗಂಟೆಗೆ ಈ ಪ್ರಕರಣದ ಪಿರ್ಯಾದಿದಾರರಾದ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿಕೊಂಡು, ಠಾಣಾ ಗುನ್ನಾ ಸಂಖ್ಯೆ 16/2017 ರಲ್ಲಿ ಪ್ರಕರಣ ದಾಖಲಿಸಿ, ದೂರು ಹಾಗೂ ಪ್ರ.ವ. ವರದಿಯನ್ನು ನಮ್ಮ ಸಿಬ್ಬಂದಿಯಾದ ಇಸ್ಮಾಯಿಲ್ ಮೊಹಮ್ಮದ್ ಶೇಖ್ ರವರ ಮೂಲಕ ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟಿರುತ್ತೇನೆ ಹಾಗೂ ಅದರ ಪ್ರತಿಗಳನ್ನು ನಮ್ಮ ಮೇಲಾಧಿಕಾರಿಗಳಿಗೆ ಈ-ಮೇಲ್ ಮೂಲಕ ರವಾನಿಸಿರುತ್ತೇನೆ. ಸಾಕ್ಷಿಯ ತಾನು ಸ್ವೀಕರಿಸಿದ ದೂರನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-19 ಎಂದು, ಸಾಕ್ಷಿಯ ಸಹಿಯನ್ನು ನಿಪಿ-19(ಎ) ಎಂದು ಗುರುತಿಸಲಾಯಿತು. ಅದೇ ರೀತಿ, ಸಾಕ್ಷಿಯು ಚಾಸಾ-1 ರವರ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-19(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ತಾನು ದಾಖಲಿಸಿದ ಪ್ರ.ವ ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-20 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-20(ಎ)

ಎಂದು ಗುರುತಿಸಲಾಯಿತು. ಆ ನಂತರ ಈ ಪ್ರಕರಣದ ಕಡತವನ್ನು ಚಾಸಾ–21 ರವರಿಗೆ ಹಸ್ತಾಂತರಿಸಿರುತ್ತೇನೆ.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ.)

ಓ.ಹೇ.ಕೇ.ಸ.ಇ.

*Sd/-*

(ಮಾಯಣ್ಣ ಬಿ.ಎಲ್.)
2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರಕನ್ನಡ, ಕಾರವಾರ